☎ Ph : 2768 3377

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

ಸಂ. ಬಿಐಎಎಪಿಎ/ಟಿಪಿ2/ಸಿಸಿ/30/2018-19 / 1784 ದಿನಾಂಕ: 6 DEC 2018

## "ಪ್ರಾರಂಭಿಕ ಪ್ರಮಾಣ ಪತ್ರ"

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)
(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)

ವಿಷಯ: ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಜಾಲ ಹೋಬಳಿ, ಹೊಸಹಳ್ಳಿ ಗ್ರಾಮದ ಸ.ನಂ 132/1 ರಲ್ಲಿ (3ಎ-37ಗು), 132/2 ರಲ್ಲಿ (31ಗು), 133/1 ರಲ್ಲಿ (33ಗು), 133/2 ರಲ್ಲಿ (33ಗು), 133/3 ರಲ್ಲಿ (1ಎ-26ಗು), 135/1 ರಲ್ಲಿ (1ಎ-03ಗು) ಮತ್ತು 136/1 ರಲ್ಲಿ (1ಎ-02ಗು) ಒಟ್ಟು 10ಎಕರೆ 5ಗುಂಟೆ ಅಥವಾ 40973.85 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಈ ಪ್ರಾಧಿಕಾರದಿಂದ ಅನುಮೋದಿಸಲಾಗಿರುವ ವಸತಿ ಉಪಯೋಗದ ಅಭಿವೃದ್ಧಿ ನಕ್ಷೆಯ ಪ್ರದೇಶದ ಖಾತಾ ಸಂಖ್ಯೆ: 53/133/123/133-55/132/2/132/1 135/1 136/1 (ಪಿಐಡಿ ಸಂಖ್ಯೆ: 150200202600520179) ರಲ್ಲಿ 28515.51ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಪ್ರಾರಂಭಿಕ ಪ್ರಮಾಣ ಪತ್ರ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:
1) ಅರ್ಜಿದಾರರ ಮನವಿ ಪತ್ರ ದಿನಾಂಕ : ಅರ್ಜಿ ಸಂಖ್ಯೆ: 4732, ದಿನಾಂಕ: 24-11-2018.
2) ದಿನಾಂಕ: 24-02-2018 ರಂದು ನಡೆದ ಪ್ರಾಧಿಕಾರದ 121 ನೇ ಸಭೆಯ ವಿಷಯ ಸಂಖ್ಯೆ: 121 [20 (37)] ರ ನಿರ್ಣಯ.
3) ಈ ಪ್ರಾಧಿಕಾರದ ಸಮ ಸಂಖ್ಯೆಯ ಪತ್ರ ದಿನಾಂಕ : 30-11-2018
4) ಪ್ರಾಧಿಕಾರಕ್ಕೆ ಶುಲ್ಕವನ್ನು ಪಾವತಿಸಿರುವ ವಿವರ : ಅರ್ಜಿದಾರರು ಶುಲ್ಕಗಳನ್ನು ಪಾವತಿಸಿರುವ ರಶೀದಿ ಸಂಖ್ಯೆ: 9291, ದಿನಾಂಕ 04-12-2018 ರೂ. 86,50,000/ (ರೂ ಎಂಬತ್ತಾರು ಲಕ್ಷದ ಐವತ್ತು ಸಾವಿರ ಮಾತ್ರ).

******************

ಮೆ॥ ಸ್ಯಾಮೀಸ್ ಡ್ರೀಮ್ಲ್ಯಾಂಡ್ ಕಂಪನಿ ಪ್ರೈವೇಟ್ ಲಿಮಿಟೆಡ್ ರವರ ಪರವಾಗಿ ಜಿಪಿಎ ದಾರರಾದ ಮೆ॥ **ಪೂರ್ವಂಕರ್ ಲಿಮಿಟೆಡ್** ಇವರಿಗೆ ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಜಾಲ ಹೋಬಳಿ, ಹೊಸಹಳ್ಳಿ ಗ್ರಾಮದ ಸ.ನಂ 132/1 ರಲ್ಲಿ (3ಎ-37ಗು), 132/2 ರಲ್ಲಿ (31ಗು), 133/1 ರಲ್ಲಿ (33ಗು), 133/2 ರಲ್ಲಿ (33ಗು), 133/3 ರಲ್ಲಿ (1ಎ-26ಗು), 135/1 ರಲ್ಲಿ (1ಎ-03ಗು) ಮತ್ತು 136/1 ರಲ್ಲಿ (1ಎ-02ಗು) ಒಟ್ಟು 10ಎಕರೆ 5ಗುಂಟೆ ಅಥವಾ 40973.85 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಈ ಪ್ರಾಧಿಕಾರದಿಂದ ಅನುಮೋದಿಸಲಾಗಿರುವ ವಸತಿ ಉಪಯೋಗದ ಅಭಿವೃದ್ಧಿ ನಕ್ಷೆಯ ಪ್ರದೇಶದ **ಖಾತಾ ಸಂಖ್ಯೆ: 53/133/123/133-55/132/2/132/1 135/1 136/1 (ಪಿಐಡಿ ಸಂಖ್ಯೆ: 150200202600520 179) ರಲ್ಲಿ 28515.51 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ** ನೀಡಲು ಕೋರಿ ಉಲ್ಲೇಖ (1) ರಲ್ಲಿ ಅರ್ಜಿ ಸಲ್ಲಿಸಿದ್ದು, ಉಲ್ಲೇಖ (2) ರ ಪ್ರಾಧಿಕಾರದ ಸಭೆಯ ನಿರ್ಣಯದಂತೆ ನಿಯಮಾವಳಿಗಳ ಪ್ರಕಾರ ನಿರಾಕ್ಷೇಪಣಾ ಪತ್ರಗಳನ್ನು ಪಡೆದು ಅನುಮೋದನೆ ನೀಡಲು ನಿರ್ಣಯಿಸಲಾಗಿದ್ದು, ಅರ್ಜಿದಾರರು ಅಗತ್ಯ

ನಿರಾಕ್ಷೇಪಣಾ ಪತ್ರಗಳನ್ನು ಸಲ್ಲಿಸಿರುವ ಹಿನ್ನಲೆಯಲ್ಲಿ ಉಲೇಖ (3) ರ ಪ್ರಾಧಿಕಾರದ ಪತ್ರದಲ್ಲಿ ಕಟ್ಟಡದ ನಕ್ಷೆಗಳಿಗೆ ಅನುಮೋದನೆ ನೀಡುವ ಸಂಬಂಧ ಅರ್ಜಿದಾರರಿಗೆ ಅಗತ್ಯ ಶುಲ್ಕಗಳನ್ನು ಪಾವತಿಸಲು ಹಾಗೂ ಕಟ್ಟಡ ನಕ್ಷೆಯಲ್ಲಿನ ನ್ಯೂನ್ಯತೆಗಳನ್ನು ಸರಿಪಡಿಸಿ, ಕಟ್ಟಡ ನೀಲಿ ನಕ್ಷೆಯ ಪ್ರತಿಗಳನ್ನು ಅರ್ಜಿದಾರರು/ಅಭಿಯಂತರರ ಸಹಿಗಳೊಂದಿಗೆ ಸಲ್ಲಿಸಲು ಸೂಚಿಸಲಾಗಿರುತ್ತದೆ.

ಉಲ್ಲೇಖ (4) ರಂತೆ ಅರ್ಜಿದಾರರು ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ ಹಾಗೂ ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿರುತ್ತಾರೆ.

ಹಾಗಾಗಿ ಮೇಲ್ಕಂಡ ಅಂಶಗಳನ್ವಯ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ನಿಬಂಧನೆಗಳೊಂದಿಗೆ ನೀಡಲಾಗಿದೆ.

## <u>ನಿಬಂಧನೆಗಳು</u>

1. ಯೋಜಿಸಿರುವ ಕಟ್ಟಡವನ್ನು **ವಸತಿ** ಉದ್ದೇಶಕ್ಕಾಗಿ ಉಪಯೋಗಿಸಬೇಕು.
2. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ **<u>ದಿನಾಂಕ: 06-12-2018 ರಿಂದ 05-12-2020</u> ರವರೆಗೆ** ಮಾತ್ರ ನೀಡಲಾಗಿರುತ್ತದೆ.
3. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ಸಾತನೂರು ಗ್ರಾಮ ಪಂಚಾಯ್ತಿರವರಿಂದ** ಪಡೆಯದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಬಾರದು.
4. ಕಟ್ಟಡ ಕಟ್ಟಲು ಪರವಾನಿಗೆಯನ್ನು **ಸಾತನೂರು ಗ್ರಾಮ ಪಂಚಾಯ್ತಿಯಿಂದ** ಪಡೆಯಬೇಕು.
5. ಕಟ್ಟಡವನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ಕಟ್ಟಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ಕಟ್ಟಡಗಳ ನಕ್ಷೆಯಂತೆಯೇ ಕೈಗೊಳ್ಳಬೇಕು. ಬೆಳವಣಿಗೆಯಲ್ಲಿನ ಯಾವುದೇ ಬದಲಾವಣೆಯನ್ನು ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಮಾಡತಕ್ಕದ್ದಲ್ಲ.
6. ವಸತಿ ಉಪಯೋಗಕ್ಕೆ ಕಟ್ಟಡ ಕಟ್ಟಲು ನಕ್ಷೆಯಲ್ಲಿ ಬಿಟ್ಟಿರುವಂತೆ ನಡುಜಾಗವನ್ನು ಬಿಟ್ಟು ಕಟ್ಟಡ ಕಟ್ಟತಕ್ಕದ್ದು ಮತ್ತು ಹಾಲಿ ರಸ್ತೆಯ ಮಧ್ಯಭಾಗದಿಂದ ನಿಯಮಾವಳಿಯಂತೆ ಜಾಗವನ್ನು ಬಿಟ್ಟು ಕಟ್ಟತಕ್ಕದ್ದು.
7. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ. ಹಾಗೂ ಅಗ್ನಿಶಾಮಕ ಇಲಾಖೆಯಿಂದ ನೀಡಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: NO/GBC(1) 215/2015 ದಿನಾಂಕ: 22-12-2017 ರಲ್ಲಿ ವಿಧಿಸಿರುವ ಎಲ್ಲಾ ನಿಂಬಂದನೆಗಳನ್ನು ಅರ್ಜಿದಾರರು ತಪ್ಪದೇ ಪಾಲಿಸತಕ್ಕದ್ದು.

☎ Ph : 2768 3377
ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ
ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.
ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

8. ಕಟ್ಟಡ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.

9. ಪ್ರಸ್ತಾವನೆ ಸಂಬಂಧ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾರವರು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಂಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

10. ಪ್ರಸ್ತಾವನೆ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ನೀಡಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: NO/PCB/781/CNP/17/H-93 ದಿನಾಂಕ:25–04–2015 ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳನ್ನು ಹಾಗೂ State Level Environment Impact Assessment Authority ಇಲಾಖೆಯಿಂದ ನೀಡಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: NO SEIAA 137 CON 2017 ದಿನಾಂಕ: 22–03–2018 ರಲ್ಲಿ ವಿಧಿಸಲಾಗಿರುವ ಎಲ್ಲಾ ನಿಂಬಂಧನೆಗಳಿಗೆ ಕಡ್ಡಾಯವಾಗಿ ಬದ್ಧರಾಗಿರತಕ್ಕದ್ದು.

11. ಪ್ರಸ್ತಾವನೆ ಸಂಬಂಧ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ರವರಿಂದ ನೀಡಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: ಅಇಂ(ವಿ)/ಬೆಗ್ರಾವೃ/ಕಾಇಂ(ಕ)/ಸಕಾಇ01/17–18/4511–12 ದಿನಾಂಕ: 23–12–2017 ರಲ್ಲಿ ವಿಧಿಸಲಾಗಿರುವ ನಿಂಬಂಧನೆಗಳಿಗೆ ಕಡ್ಡಾಯವಾಗಿ ಬದ್ಧರಾಗಿರತಕ್ಕದ್ದು.

12. ಪ್ರಸ್ತಾವನೆ ಸಂಬಂಧ ಯಲಹಂಕ ಏರ್‌ಪೋರ್ಸ್ ಸ್ಟೇಷನ್ ರವರಿಂದ ನೀಡಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: Air/HQ/s 17726/4/ATS(TY BM-MMLXI) ದಿನಾಂಕ: 22–04–2015 ರಲ್ಲಿ ವಿಧಿಸಲಾಗಿರುವ ನಿಂಬಂಧನೆಗಳಿಗೆ ಕಡ್ಡಾಯವಾಗಿ ಬದ್ಧರಾಗಿರತಕ್ಕದ್ದು.

13. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rain Water harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಗಿಡ/ಮರವನ್ನು ಬೆಳೆಸತಕ್ಕದ್ದು.

14. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.

15. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ನಕ್ಷೆಯು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

16. ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.

17. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.

18. ಈ ಅನುಮತಿ ನೀಡಿರುವುದಕ್ಕೆ ಉಲ್ಲಂಘಿಸಿ ಅಭಿವೃದ್ಧಿಯನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.

19. ಅಂತರಾಷ್ಟ್ರೀಯ ವಾಯು ನೆಲೆಯ ಪರಿಸರದಲ್ಲಿ ಬರುವುದರಿಂದ ಶಬ್ದಮಾಲಿನ್ಯ ಸಹಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

20. ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ನಿರಾಕ್ಷೇಪಣಾ ಪತ್ರಗಳನ್ನು ಸಹ ತಪ್ಪದೇ ಪಡೆಯತಕ್ಕದ್ದು.

21. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಪೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತಂತಾನೆ ರದ್ದಾಗುತ್ತದೆ.

**ತಮ್ಮ ವಿಶ್ವಾಸಿ,**

06.12.2018

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ**
**ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ,**
ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

*ಇವರಿಗೆ:*

**ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು,**
**ಸಾತನೂರು** ಗ್ರಾಮ ಪಂಚಾಯ್ತಿ,
ಬೆಂಗಳೂರು ಉತ್ತರ (ಅಪರ) ತಾಲ್ಲೂಕು
ಬೆಂಗಳೂರು ಜಿಲ್ಲೆ.

ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

ಪ್ರತಿಯನ್ನು :

1. ಮೆ॥ ಸ್ಯಾಮೀಸ್ ಡ್ರೀಮ್‌ಲ್ಯಾಂಡ್ ಕಂಪನಿ ಪ್ರೈವೇಟ್ ಲಿಮಿಟೆಡ್ ರವರ ಪರವಾಗಿ (ಜಿಪಿಎ ಹೊಲ್ಡಾರ್ ಮೆ॥ ಪೂರ್ವಂಕರ್ ಲಿಮಿಟೆಡ್), ನಂ.130/1, ಅಲಸೂರು ರಸ್ತೆ, ಬೆಂಗಳೂರು-560042 ರವರ ಮಾಹಿತಿಗಾಗಿ.
2. ಕಛೇರಿ ಪ್ರತಿ